# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1391(1575)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು

ವಿಷಯ : ಕೊಡಗಿನಲ್ಲಿ ಪ್ರತಿ ವರ್ಷ ನಡೆಯುವ ಕೊಡವ ಕೌಟುಂಬಿಕ ಹಾಕಿ ಹಬ್ಬಕ್ಕೆ ಪ್ರತಿ ವರ್ಷ ಕನಿಷ್ಠ 5 ಕೋಟಿ ರೂ. ಅನುದಾನ ನೀಡುವ ಬಗ್ಗೆ

(ಅ) ಕ್ರೀಡಾ ಕಲಿಗಳ ತವರು ಹಾಗೂ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದ ಹಾಕಿ ಕ್ರೀಡಾ ಪಟುಗಳನ್ನು ದೇಶಕ್ಕೆ ಕೊಡುಗೆ ನೀಡಿದ ಕೊಡಗಿನಲ್ಲಿ ಪ್ರತಿ ವರ್ಷ ನಡೆಯುವ ಕೊಡವ ಕೌಟುಂಬಿಕ ಹಾಕಿ ಹಬ್ಬಕ್ಕೆ ಪ್ರತಿ ವರ್ಷ ಕನಿಷ್ಠ 5 ಕೋಟಿ ರೂಪಾಯಿ ಅನುದಾನವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಒದಗಿಸಬೇಕೆಂಬ ಬೇಡಿಕೆ ಬಹು ಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದ ಹಾಕಿ ಕ್ರೀಡಾ ಪಟುಗಳನ್ನು ದೇಶಕ್ಕೆ ಕೊಡುಗೆ ನೀಡುವಲ್ಲಿ ಮಹತ್ತರ ಪಾತ್ರ ವಹಿಸುತ್ತಾ ಬಂದಿರುವ ಕೊಡವ ಕೌಟುಂಬಿಕ ಹಾಕಿ ಹಬ್ಬಕ್ಕೆ 2021-22ನೇ ಸಾಲಿನಿಂದಲಾದರೂ ಪ್ರತಿ ವರ್ಷ ಕನಿಷ್ಠ 5 ಕೋಟಿ ರೂಪಾಯಿ ಅನುದಾನವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಒದಗಿಸಲು ಕ್ರಮವಹಿಸುವುದೇ?